ಶಾಸನ ರಚನಾ ಕಾರ್ಯಕಲಾಪಗಳು

ವಿಧೇಯಕವನ್ನು ಮಂಡಿಸುವುದು

ಎ.ಕರ್ನಾಟಕ ಧನ ವಿನಿಯೋಗ ವಿಧೇಯಕ 1992

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ವೀರಪ್ಪ ಮೊಯಿಲಿ(ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಿಗಳು):- ಮಾನ್ಯ ಅಧ್ಯಕ್ಷರೇ, ಮಾನ್ಯ ಮಂತ್ರಿಗಳ ಪರವಾಗಿ 1992ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷಿಣಿಯವರು:- ಪ್ರಸ್ತಾವ ಏನೆಂದರೆ: "1992ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ. ವೀರಪ್ಪ ಮೊಯಿಲಿ:- ಮಾನ್ಯ ಅಧ್ಯಕ್ಷರೇ, 1992ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷಿಣಿಯವರು:- ವಿಧೇಯಕವನ್ನುಮಂಡಿಸಲಾಗಿದೆ.

ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು(ತಿದ್ದುಪಡಿ) ವಿಧೇಯಕ 1992

ಶ್ರೀ ಎಂ. ವೀರಪ್ಪ ಮೊಯಿಲಿ(ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಿಗಳು:-, ಮಾನ್ಯ ಉಪಾಧ್ಯಕ್ಷರೇ, 1992ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು(ತಿದ್ದುಪಡಿ) ವಿಧೇಯಕನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷಿಣಿಯವರು:- ಪ್ರಸ್ತಾವ ಏನೆಂದರೆ: "1992ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು(ತಿದ್ದುಪಡಿ) ವಿಧೇಯಕನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ. ವೀರಪ್ಪ ಮೊಯಿಲಿ:- ಮಾನ್ಯ ಉಪಾಧ್ಯಕ್ಷರೇ, 1992ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು(ತಿದ್ದುಪಡಿ) ವಿಧೇಯಕನ್ನು ಸಭೆಯ ಮುಂದೆ ಮಂಡಿತ್ತೇನೆ.

ಉಪಾಧ್ಯಕ್ಷಿಣಿಯವರು:-ಅನುಬಂಧ-II ವಿಧೇಯಕವನ್ನುಮಂಡಿಸಲಾಗಿದೆ.

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಈ ಹಂತದಲ್ಲಿ ಮಾನ್ಯ ಜನತಾ ದಳದ ಸದಸ್ಯರು ಸಭೆಗೆ ಆಗಮಿಸಿದರು)

ಶ್ರೀ ಎಂ. ವೀರಪ್ಪ ಮೊಯಿಲಿ:- ವೆಲ್‌ಕಂ ವೆಲ್‌ಕಂ

ಶ್ರೀ ಡಿ. ಬಿ. ಚಂದ್ರೇಗೌಡ(ವಿರೋಧ ಪಕ್ಷದ ನಾಯಕರು):- ಯಾವ ವಿಧೇಯಕವನ್ನು ಮಂಡಿಸಬೇಕೆಂದಿದ್ದೀರಿ?

ಉಪಾಧ್ಯಕ್ಷಿಣಿಯವರು:- ಕರ್ನಾಟಕ ಧನ ವಿಧೇಯಕ 1992

ಕರ್ನಾಟಕ ಧನ ವಿಧೇಯಕ 1992

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪ ಮೊಯಿಲಿ(ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಮಂತ್ರಿಗಳು):- ಮಾನ್ಯ ಅಧ್ಯಕ್ಷರೇ, ಮಾನ್ಯ ಮಂತ್ರಿಗಳ ಪರವಾಗಿ 1992ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಉಪಾಧ್ಯಕ್ಷಿಣಿಯವರು:- ಪ್ರಸ್ತಾವ ಏನೆಂದರೆ: "1992ನೇ ಸಾಲಿನ ಕರ್ನಾಟಕ ಧನ ವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2ರಿಂದ 3ರವರೆಗೆ:-

ಉಪಾಧ್ಯಕ್ಷಿಣಿಯವರು:- ಖಂಡ 2 ಮತ್ತು 3, ಎರಡೂ ಸೇರಿದಂತೆ ವಿಧೇಯ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2ರಿಂದ 3ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಉಪಾಧ್ಯಕ್ಷರು:- ಪ್ರಸ್ತಾವ ಏನೆಂದರೆ, " ಮೊದಲನೇ ಖಂಡ, ದೀರ್ಘ್ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೇ ಖಂಡ, ದೀರ್ಘ್ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯಿಲಿ:- ಮಾನ್ಯ ಅಧ್ಯಕ್ಷರೇ, 1992ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು:- ಪ್ರಸ್ತಾವ ಏನೆಂದರೆ: 1992ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು,

ಕರ್ನಾಟಕ ಜಿಲ್ಲಾಪರಿಷತ್ತುಗಳು, ತಾಲ್ಲೂಕು ಪಂಚಾಯಿತಿ ಸಮಿತಿಗಳು, ಮಂಡಲ ಪಂಚಾಯಿತಿಗಳ ಮತ್ತು ನ್ಯಾಯ ಪಂಚಾಯಿತಿಗಳ (ತಿದ್ದುಪಡಿ) ವಿಧೇಯಕ 1992

(ಪರ್ಯಾಲೋಚನಾ ಪ್ರಸ್ತಾವ)

ಉಪಾಧ್ಯಕ್ಷಿಣಿಯವರು:- ಈಗ ವಿಧೇಯಕವನ್ನು ಪುನರ್‌ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು. ಕರ್ನಾಟಕ ಜಿಲ್ಲಾಪರಿಷತ್ತುಗಳು, ತಾಲ್ಲೂಕು ಪಂಚಾಯಿತಿ ಸಮಿತಿಗಳು, ಮಂಡಲ ಪಂಚಾಯಿತಿಗಳು ಮತ್ತು ನ್ಯಾಯ ಪಂಚಾಯಿತಿಗಳ(ತಿದ್ದುಪಡಿ) ವಿಧೇಯಕ 1992ನ್ನು ಮಾನ್ಯ ಕಂದಾಯ ಸಚಿವರು.....

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ(ಕಂದಾಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):-ಸನ್ಮಾನ್ಯ ಉಪಾಧ್ಯಕ್ಷಿಣಿಯವರೇ...

SRI. D. B. CHANDREGOWDA:- I have a point of order.